ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 24/12/2019

# ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶ

## ಮಂಗಳೂರು ಗೋಲಿಬಾರ್: 3 ತಿಂಗಳಲ್ಲಿ ವರದಿಗೆ ಸೂಚನೆ

**ಬೆಂಗಳೂರು:** ಮಂಗಳೂರು ಗೋಲಿಬಾರ್ ಪ್ರಕರಣ ಸಂಬಂಧ ಮ್ಯಾಜಿಸ್ಟೀರಿಯಲ್ ತನಿಖೆ ನಡೆಸಲು ರಾಜ್ಯ ಸರಕಾರ ಆದೇಶ ಹೊರಡಿಸಿದೆ.

ಮಂಗಳೂರಿನಲ್ಲಿ ಡಿಸೆಂಬರ್ 19ರಂದು ಸಂಭವಿಸಿದ ಘಟನೆಯಲ್ಲಿ ಇಬ್ಬರು ಮೃತಪಟ್ಟಿದ್ದರು. ಇದರ ಬಗ್ಗೆ ಸರಕಾರ ಜಿಲ್ಲಾಧಿಕಾರಿ ಕಡೆಯಿಂದ ವರದಿ ತರಿಸಿಕೊಂಡಿತ್ತು. ಅದನ್ನು ಆಧರಿಸಿ ಇದೀಗ ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶಿಸಲಾಗಿದೆ. ಈ ಸಂಬಂಧ ಮ್ಯಾಜಿಸ್ಟೀರಿಯಲ್ ವಿಚಾರಣೆ ನಡೆಸಲು ಉಡುಪಿ ಜಿಲ್ಲೆ ಜಿಲ್ಲಾಧಿಕಾರಿ ಹಾಗೂ ದಂಡಾಧಿಕಾರಿ ಜಿ.ಜಗದೀಶ್ ಅವರನ್ನು ಕಾರ್ಯ ನಿರ್ವಾಹಕ ದಂಡಾಧಿಕಾರಿಯಾಗಿ ನೇಮಿಸಲಾಗಿದೆ. ಜತೆಗೆ 3 ತಿಂಗಳ ಒಳಗೆ ವಿಚಾರಣೆ ನಡೆಸಿ ಸರಕಾರಕ್ಕೆ ವರದಿ ಸಲ್ಲಿಸಲು ಸೂಚಿಸಲಾಗಿದೆ.

**ಕಾಯಿದೆಯಲ್ಲಿ ಗೊಂದಲವಿಲ್ಲ:** ಸಿಎಎಯಿಂದ ಮುಸ್ಲಿಂ ಬಾಂಧವರಿಗೆ ಸಮಸ್ಯೆಯಾಗದೆಂದು ಪ್ರಧಾನಿ ಸ್ಪಷ್ಟಪಡಿಸಿದ್ದಾರೆ. ಆದರೆ ಕಾಂಗ್ರೆಸ್‌ನವರು ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ಸಿಎಂ ಯಡಿಯೂರಪ್ಪ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಸೋಮವಾರ ಮಾತನಾಡಿದ ಅವರು, ''ಈ ಕಾಯಿದೆಯಿಂದ ಅಲ್ಪಸಂಖ್ಯಾತ ಮುಸ್ಲಿಂ ಬಾಂಧವರಿಗೆ ಯಾವ ರೀತಿ ತೊಂದರೆಯಾಗುವುದೆಂದು ಯಾರೊಬ್ಬರೂ ಹೇಳಲು ತಯಾರಿಲ್ಲ ಎಂದರು.



## ನ್ಯಾಯಾಂಗ ತನಿಖೆಗೆ ಸಿದ್ದರಾಮಯ್ಯ ಆಗ್ರಹ



ಮಂಗಳೂರಿನ ಕಂದಕ್ ಸಮೀಪದ ಜಲೀಲ್ ಅವರ ಮನೆಗೆ ಮಾಜಿ ಸಿಎಂ ಸಿದ್ದರಾಮಯ್ಯ ಭೇಟಿ ನೀಡಿದರು.

▪ **ವಿಕ ಸುದ್ದಿಲೋಕ** ಮಂಗಳೂರು

ಸಿಐಡಿ ತನಿಖೆಯನ್ನು ನಾವು ಒಪ್ಪುವುದಿಲ್ಲ. ಸತ್ಯ ಏನೆಂಬುದು ತಿಳಿಯಬೇಕಾದರೆ ಹೈಕೋರ್ಟ್ ಹಾಲಿ ನ್ಯಾಯಾಧೀಶರಿಂದ ನ್ಯಾಯಾಂಗ ತನಿಖೆ ನಡೆಯಬೇಕು ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದರು.

ಮಂಗಳೂರು ವಿಮಾನ ನಿಲ್ದಾಣದಲ್ಲಿ ಸೋಮವಾರ ಸುದ್ದಿಗಾರರ ಜತೆ ಮಾತನಾಡಿ, ''ಮುಖ್ಯಮಂತ್ರಿ ಯಡಿಯೂರಪ್ಪ ಯಾವಾಗಲೂ ಸುಳ್ಳು ಹೇಳೋದು. ಕೊನೆಗೆ ಅವರೇ ಸರ್ಟಿಫಿಕೆಟ್ ಕೊಡುತ್ತಾರೆ. ಗೋಲಿಬಾರ್ ಮಾಡಿದವರು ಪೊಲೀಸರೇ ಅಲ್ಲವೇ? ಹಾಗಿರುವಾಗ ಸಿಐಡಿ ತನಿಖೆಗೆ ಕೊಟ್ಟಿರೋದು ಸರಿಯಲ್ಲ,'' ಎಂದರು. ''ಮಂಗಳೂರಿನಲ್ಲಿ ನಡೆದ ಪೊಲೀಸ್ ದೌರ್ಜನ್ಯ ಹಾಗೂ ಪೊಲೀಸರ ಅತಿರೇಕದ ಕುರಿತು ಸಿಐಡಿ ತನಿಖೆಯಿಂದ ಸಂತ್ರಸ್ತ ಕುಟುಂಬಕ್ಕೆ ನ್ಯಾಯ ಒದಗಿಸಲು ಸಾಧ್ಯವಿಲ್ಲ ''ಎಂದರು.

### ಜೈಲಿಗೆ ಹಾಕಿದರೂ ದಾಖಲೆ ನೀಡಲ್ಲ ಎಂದ ಡಿಕೆಶಿ

**ಕನಕಪುರ:** ಪೌರತ್ವ ಋಜುಪಾತುಪಡಿಸುವ ದಾಖಲೆ ನೀಡದವರನ್ನು ಕೇಂದ್ರ ಸರಕಾರ ಜೈಲಿಗೆ ಹಾಕುತ್ತದೆ ಎಂದಾದರೆ, ಅಂಥ ಸಾಲಿನಲ್ಲಿ ನಾನು ಮುಂಚೂಣಿಯಲ್ಲಿರುತ್ತೇನೆ ಎಂದು ಮಾಜಿ ಸಚಿವ ಡಿ.ಕೆ. ಶಿವಕುಮಾರ್ ಹೇಳಿದರು. ಪೌರತ್ವ ತಿದ್ದುಪಡಿ ಕಾಯಿದೆ ವಿರುದ್ಧ ಮುಸಲ್ಮಾನ ಸಮುದಾಯದವರು ಕನಕಪುರ ತಾಲೂಕು ಕಚೇರಿ ಬಳಿ ಸೋಮವಾರ ನಡೆಸಿದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು. ''ಸಿಎಂ ಬಿ.ಎಸ್.ಯಡಿಯೂರಪ್ಪ ಹಾಗೂ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ತಮಗೆ ಅಧಿಕಾರವಿದೆ ಎಂದು ಮಾಡಿದ್ದೆಲ್ಲವನ್ನೂ ಸಹಿಸುವುದಿಲ್ಲ,'' ಎಂದು ಎಚ್ಚರಿಕೆ ನೀಡಿದರು.

**ಮೃತರ ಕುಟುಂಬಕ್ಕೆ 7.5ಲಕ್ಷ ಚೆಕ್:** ಗೋಲಿಬಾರ್‌ಗೆ ಬಲಿಯಾದ ಜಲೀಲ್ ಕಂದಕ್ ಹಾಗೂ ನೌಶೀನ್ ಬೆಂಗ್ರೆ ಅವರ ನಿವಾಸಕ್ಕೆ ಸೋಮವಾರ ಭೇಟಿ ನೀಡಿದ ಮಾಜಿ ಸಿಎಂ ಸಿದ್ದರಾಮಯ್ಯ ಅವರು ಎರಡೂ ಕುಟುಂಬಗಳಿಗೆ ಸಾಂತ್ವನ ಹೇಳಿ, ತಲಾ 7.50 ಲಕ್ಷ ರೂ. ಪರಿಹಾರದ ಚೆಕ್ ಹಸ್ತಾಂತರಿಸಿದರು. ಮನೆಯ ಸುತ್ತಮುತ್ತ ಬಿಗಿ ಪೊಲೀಸ್ ಭದ್ರತೆ ಏರ್ಪಡಿಸಲಾಗಿತ್ತು. ಪುಟ್ಟ ಮನೆಯಲ್ಲಿ ಕುಟುಂಬ ವರ್ಗದವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಪರಿಹಾರ ನಿಧಿಯಲ್ಲಿ ತಲಾ 5 ಲಕ್ಷ ರೂ. ಸಿದ್ದರಾಮಯ್ಯ ಹಾಗೂ ತಲಾ 2.50 ಲಕ್ಷ ರೂ. ಜಿಲ್ಲಾ ಕಾಂಗ್ರೆಸ್ ಭರಿಸಿದೆ.